ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕೋವಿಡ್-19 ನಿಂದ ರಾಜ್ಯದ ಪ್ರವಾಸೋದ್ಯಮ ಕ್ಷೀಣಿಸುತ್ತಿರುವ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) –

348 (366) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದೇಶದಲ್ಲಿ ಅತ್ಯುತ್ತಮವಾದ ಪ್ರವಾಸಿ ತಾಣಗಳನ್ನು ಹೊಂದಿರುವ ಕರ್ನಾಟಕ ರಾಜ್ಯ ಕೋವಿಡ್ ಸಂಕಷ್ಟಕ್ಕೆ ತುತ್ತಾಗಿ ಪ್ರವಾಸೋದ್ಯಮ ಕ್ಷೀಣಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ರಾಜ್ಯದ ಧಾರ್ಮಿಕ ಪ್ರವಾಸೋದ್ಯಮ ಚಾರಿತ್ರಿಕ ಮತ್ತು ಅರಣ್ಯ ಪ್ರವಾಸೋದ್ಯಮ ಕರಾವಳಿ ಪ್ರವಾಸಿ ತಾಣಗಳ ಪುನರ್ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಪ್ರವಾಸೋದ್ಯಮವನ್ನು ಅವಲಂಬಿಸಿರುವ ಸಾವಿರಾರು ಜನರು ಕೋವಿಡ್ ಸಂಕಷ್ಟದಿಂದ ನರಳುತ್ತಿದ್ದು, ಪ್ರವಾಸೋದ್ಯಮ ಇಲಾಖೆಯಿಂದ ಅವರನ್ನು ಉತ್ತೇಜಿಸುವ ನೂತನ ಕಾರ್ಯಕ್ರಮಗಳೇನಾದರೂ ಇವೆಯೇ; (ವಿವರ ನೀಡುವುದು)

(ಈ) ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಬೆಳಕಿಗೆ ಬಾರದ ಅದ್ಭುತ ಪ್ರವಾಸಿ ತಾಣಗಳಿದ್ದು ಇವುಗಳನ್ನು ಗುರುತಿಸಿ ಅಭಿವೃದ್ಧಿಪಡಿಸಲು ಸರ್ಕಾರ ಮುಂದೆ ಇರುವ ಪ್ರಸ್ತಾವನೆ ಯಾವುದು?